ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.
(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು)

(ಅನುಬಂಧ–13)

11. ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ವಿಧೇಯಕ, 2012

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಸ್. ಸುರೇಶ್ ಕುಮಾರ್ (ಮಾನ್ಯ ಕಾನೂನು, ಮಾನವ ಹಕ್ಕು, ಸಂಸದೀಯ ವ್ಯವಹಾರಗಳು, ನಗರಾಭಿವೃದ್ಧಿ, ಬೆಂಗಳೂರು ಜಲಮಂಡಳಿ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ) :– ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ವಿಧಾನಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲಾಯಿತು

ಶ್ರೀ ಎಸ್. ಸುರೇಶ್ ಕುಮಾರ್ (ಮಾನ್ಯ ಕಾನೂನು, ಮಾನವ ಹಕ್ಕು, ಸಂಸದೀಯ ವ್ಯವಹಾರಗಳು, ನಗರಾಭಿವೃದ್ಧಿ, ಬೆಂಗಳೂರು ಜಲಮಂಡಳಿ ಸಚಿವರು) : ಮಾನ್ಯ ಅಧ್ಯಕ್ಷರೆ, ಕಳೆದ ಅನೇಕ ವರ್ಷಗಳಿಂದ ಸುಮಾರು 17,000 ರೂ. ಗಳಿಗೂ ಮಿಕ್ಕಿ ದಿನಗೂಲಿ ನೌಕರರು ಸರ್ಕಾರದ ವಿವಿಧ ಇಲಾಖೆಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ. ವಿಶೇಷವಾಗಿ 2000 ಮತ್ತು 2006ನೇ ಇಸವಿಯಲ್ಲಿ ಬಂದ ಉಮಾದೇವಿ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯ ತೀರ್ಪನ್ನು ಕೊಟ್ಟ ನಂತರ ಇವರ್ಯಾರನ್ನೂ ಕೂಡ regularize ಮಾಡುವುದಕ್ಕೆ ಅವಕಾಶವಿರಲಿಲ್ಲ. ಅವರುಗಳನ್ನು regularize ಮಾಡಬೇಕೆಂಬ ಬೇಡಿಕೆ ಎಲ್ಲಾ ಕಡೆಯಿಂದ ಇದೆ. ಅತ್ಯಂತ ಕಡಿಮೆ ಸಂಬಳ ಬರುತ್ತಿದೆ. ನಮ್ಮ ಸರ್ಕಾರ ಬಂದ ನಂತರ ಅವರುಗಳಿಗೆ ಎರಡು ಬಾರಿ ಒಂದೊಂದು ಸಾವಿರ ರೂ.ಗಳ ಸಂಬಳವನ್ನು ಹೆಚ್ಚು ಮಾಡಿದ್ದೇವೆ.

ಅದನ್ನೆಲ್ಲಾ ಅರ್ಥ ಮಾಡಿಕೊಂಡು ಇದರ ಬಗ್ಗೆ ಒಂದು ಕಾಯಿದೆಯನ್ನು ತರಬೇಕೆಂದು ಮಾನ್ಯ ಲೋಕೋಪಯೋಗಿ ಸಚಿವರಾದ ಸಿ.ಎಂ.ಉದಾಸಿ ಯವರ ನೇತೃತ್ವದಲ್ಲಿ ಒಂದು ಉಪ ಸಮಿತಿಯನ್ನು ಕೂಡ ಮಾಡಿದ್ದೆವು. ಆ ಕಾಯಿದೆಯ ಸ್ವರೂಪದಲ್ಲಿ ಅವರಿಗೆ pensionary benefit ಕೊಡುವುದು, ಡಿ.ಎ. ಜಾಸ್ತಿ ಮಾಡುವುದು ಒಟ್ಟಿನಲ್ಲಿ ಅವರಿಗೆ ಭದ್ರತೆಯನ್ನು ಕೊಟ್ಟು, ಇವತ್ತು regular ಕೆಲಸವನ್ನು ಮಾಡುತ್ತಿರುವವರಿಗಿಂತ ಕಡಿಮೆ ಸಂಬಳ ಬರದಿರುವ ರೀತಿಯಲ್ಲಿ ಒಂದು ಕಾಯಿದೆಯನ್ನು ತಂದಿದ್ದೇವೆ. ದಯವಿಟ್ಟು ಸದನ ಈ ಕಾಯಿದೆಗೆ ಒಪ್ಪಿಗೆಯನ್ನು ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು : ಪ್ರಸ್ತಾವವನ್ನು ಮಂಡಿಸಲಾಯಿತು. ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2012ನೇ ಸಾಲಿನ ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು
ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಅಧ್ಯಕ್ಷರು : ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ.

ಖಂಡ 2 ರಿಂದ 11 ರವರೆಗೆ

ಅಧ್ಯಕ್ಷರು : 2 ರಿಂದ 11 ರವರೆಗಿನ ಖಂಡಗಳು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು
ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ

2ರಿಂದ 11ರವರೆಗಿನ ಖಂಡಗಳು ವಿಧೇಯಕದ ಅಂಗವಾದವು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 11 ರವರೆಗಿನ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಮೊದಲನೆ ಖಂಡ, ಹೆಸರು ಮತ್ತು ಅವತರಣಿಕೆ

ಅಧ್ಯಕ್ಷರು : ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಬೇಕೆಂಬುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು"ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆಯನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಸ್. ಸುರೇಶ್‌ಕುಮಾರ್ (ಮಾನ್ಯ ಕಾನೂನು, ಮಾನವ ಹಕ್ಕು, ಸಂಸದೀಯ ವ್ಯವಹಾರ, ನಗರಾಭಿವೃದ್ಧಿ, ಬೆಂಗಳೂರು ಜಲಮಂಡಳಿ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ):– ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು : ಪ್ರಸ್ತಾವವನ್ನು ಮಂಡಿಸಲಾಗಿದೆ.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ,

2012ನೇ ಸಾಲಿನ ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು
ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು)